Akashvani : Bengaluru
National Bulletin In Kannada
03.11.2025 : 1310hrs
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

03.11.2025 : 1310hrs

*******

ಮುಖ್ಯಾಂಶಗಳು

೧. ಭಾರತ ಈಗ ತಾಂತ್ರಿಕ ಪರಿವರ್ತನೆಯ ಪ್ರವರ್ತಕ ರಾಷ್ಟ್ರ - ಪ್ರಧಾನಿ ನರೇಂದ್ರ ಮೋದಿ

೨. ಉತ್ತರಾಖಂಡ ವಿಧಾನಸಭೆಯ ವಿಶೇಷ ಅಧಿವೇಶನ ಉದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಷಣ

೩. ಬಿಹಾರ ವಿಧಾನಸಭೆ ಚುನಾವಣೆ ; ಮೊದಲ ಹಂತದ ಮತದಾನಕ್ಕೆ ಬಿರುಸುಗೊಂಡ ಪ್ರಚಾರ

೪. ಪಾಕಿಸ್ತಾನದಿಂದ ಪರಮಾಣು ಶಸ್ತ್ರಾಸ್ತ್ರ ಪರೀಕ್ಷೆ - ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್

***************

ಭಾರತ ಈಗ ತಂತ್ರಜ್ಞಾನದ ಗ್ರಾಹಕನಾಗುವ ಬದಲು ತಾಂತ್ರಿಕ ಪರಿವರ್ತನೆಯ ಪ್ರವರ್ತಕ ರಾಷ್ಟ್ರವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದ್ದಾರೆ. ನವದೆಹಲಿಯ ಭಾರತ್ ಮಂಟಪಂನಲ್ಲಿಂದು ಉದಯೋನ್ಮುಖ ವಿಜ್ಞಾನ ಮತ್ತು ತಂತ್ರಜ್ಞಾನ ನಾವೀನ್ಯತಾ ಸಮಾವೇಶ-ಎಸ್ಟಿಕ್ ೨೦೨೫ನ್ನು ಉದ್ಘಾಟಿಸಿ ಅವರು ಮಾತನಾಡಿದರು. ದೇಶದಲ್ಲಿ ಆಧುನಿಕ ನಾವೀನ್ಯತೆಯ ಪರಿಸರ ವ್ಯವಸ್ಥೆಯನ್ನು ನಿರ್ಮಿಸಲು, ಸಂಶೋಧನೆಗೆ ಅನುಕೂಲಕರ ಪರಿಸರವನ್ನು ನಿರ್ಮಿಸುವತ್ತ ಕೇಂದ್ರ ಸರ್ಕಾರ ಗಮನಹರಿಸುತ್ತಿದೆ. ವಿಶ್ವದ ಅತ್ಯಂತ ಯಶಸ್ವಿ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯವನ್ನು ದೇಶದಲ್ಲಿ ರಚಿಸಲಾಗಿದೆ ಎಂದು ಪ್ರಧಾನಿ ಮೋದಿ ತಿಳಿಸಿದರು.

ಧ್ವನಿ : ಪ್ರಧಾನಿ ನರೇಂದ್ರ ಮೋದಿ ( ೨೩ ಸೆಕೆಂಡುಗಳು)

ಇದೇ ವೇಳೆ ದೇಶದಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ ಪರಿಸರ ವ್ಯವಸ್ಥೆಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ೧ ಲಕ್ಷ ಕೋಟಿ ರೂಪಾಯಿ ಮೊತ್ತದ ಸಂಶೋಧನೆ, ಅಭಿವೃದ್ಧಿ ಮತ್ತು ನಾವೀನ್ಯತಾ ಯೋಜನಾ ನಿಧಿಗೆ ಪ್ರಧಾನಿ ಚಾಲನೆ ನೀಡಿದರು. ಈ ಮೂರು ದಿನಗಳ ಸಮಾವೇಶ ಶೈಕ್ಷಣಿಕ, ಸಂಶೋಧನಾ ಸಂಸ್ಥೆಗಳು, ಉದ್ಯಮಗಳು ಮತ್ತು ಸರ್ಕಾರದ ಮೂರು ಸಾವಿರಕ್ಕೂ ಅಧಿಕ ಪ್ರತಿನಿಧಿಗಳನ್ನು ಒಟ್ಟುಗೂಡಿಸಲಿದೆ. ಕಾರ್ಯಕ್ರಮದ ಭಾಗವಾಗಿ ಚರ್ಚೆಗಳು, ವಿಚಾರ ಸಂಕಿರಣ, ಪ್ರಾತ್ಯಕ್ಷಿಕೆ ಮತ್ತು ತಂತ್ರಜ್ಞಾನ ಪ್ರದರ್ಶನಗಳು ನಡೆಯಲಿವೆ.

***************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಡೆಹ್ರಾಡೂನ್‌ನಲ್ಲಿ ಉತ್ತರಾಖಂಡ ವಿಧಾನಸಭೆಯ ವಿಶೇಷ ಅಧಿವೇಶನ ಉದ್ದೇಶಿಸಿ ಮಾತನಾಡುತ್ತಿದ್ದಾರೆ. ರಾಜ್ಯ ಸ್ಥಾಪನೆಯ ಬೆಳ್ಳಿ ಮಹೋತ್ಸವದ ಅಂಗವಾಗಿ ಈ ಅಧಿವೇಶನ ನಡೆಯುತ್ತಿದೆ. ವಿಶೇಷ ಅಧಿವೇಶನ ಉತ್ತರಾಖಂಡದ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಪರಂಪರೆ, ಅದರ ೨೫ ವರ್ಷಗಳ ಅಭಿವೃದ್ಧಿ ಪ್ರಯಾಣ ಮತ್ತು ಭವಿಷ್ಯದ ನಿರೀಕ್ಷೆಗಳ ಮೇಲೆ ಕೇಂದ್ರೀಕರಿಸಿದೆ. ರಾಜ್ಯದ ಪ್ರಗತಿ ಮತ್ತು ಮುಂಬರುವ ವರ್ಷಗಳ ಮಾರ್ಗಸೂಚಿಯ ಮೇಲೆ ಚರ್ಚೆಗಳು ಕೇಂದ್ರೀಕೃತವಾಗಿವೆ. ರಾಷ್ಟ್ರಪತಿಯವರ ಭಾಷಣಕ್ಕೂ ಮುನ್ನ ರಾಜ್ಯಪಾಲರು, ಮುಖ್ಯಮಂತ್ರಿ, ವಿಧಾನಸಭಾಧ್ಯಕ್ಷ ಮತ್ತು ವಿರೋಧ ಪಕ್ಷದ ನಾಯಕರು ಸ್ವಾಗತ ಭಾಷಣ ಮಾಡಿದರು.

***************

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಎರಡು ದಿನಗಳ ಕೇರಳ ಭೇಟಿಗಾಗಿ ಇಂದು ತಿರುವನಂತಪುರಕ್ಕೆ ಆಗಮಿಸಲಿದ್ದಾರೆ. ಅಧಿಕಾರ ವಹಿಸಿಕೊಂಡ ನಂತರ ರಾಜ್ಯಕ್ಕೆ, ಇದು ಅವರ ಮೊದಲ ಭೇಟಿಯಾಗಿದೆ. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ತಿರುವನಂತಪುರಕ್ಕೆ ಆಗಮಿಸಿ, ಫಾತಿಮಾ ಮಾತಾ ರಾಷ್ಟ್ರೀಯ ಕಾಲೇಜಿನ ವಜ್ರಮಹೋತ್ಸವ ಆಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲು ಕೊಲ್ಲಂಗೆ ತೆರಳಲಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ, ಉಪರಾಷ್ಟ್ರಪತಿ, ಕೊಲ್ಲಂನಲ್ಲಿರುವ ಭಾರತೀಯ ತೆಂಗಿನಕಾಯಿ ರಫ್ತುದಾರರ ಸಂಘಗಳ ಒಕ್ಕೂಟದ ಸದಸ್ಯರೊಂದಿಗೆ ಸಂವಾದ ನಡೆಸಲಿದ್ದಾರೆ. ನಾಳೆ, ಅವರು

ತಿರುವನಂತಪುರಂನಲ್ಲಿರುವ ಶ್ರೀ ಚಿತ್ರ ತಿರುನಾಳ್ ವೈದ್ಯಕೀಯ ವಿಜ್ಞಾನ ಮತ್ತು ತಂತ್ರಜ್ಞಾನ ಸಂಸ್ಥೆಗೆ ಭೇಟಿ ನೀಡಲಿದ್ದಾರೆ.

***************

ಬಿಹಾರ ವಿಧಾನಸಭಾ ಚುನಾವಣೆಯ ಮೊದಲ ಹಂತದ ಪ್ರಚಾರ ನಾಳೆ ಮುಕ್ತಾಯಗೊಳ್ಳಲಿದೆ. ಎನ್‌ಡಿಎ ಮತ್ತು ಮಹಾಘಟಬಂಧನ್ ಮೈತ್ರಿಕೂಟದ ಹಿರಿಯ ನಾಯಕರು ತಮ್ಮ ಮೈತ್ರಿಕೂಟದ ಅಭ್ಯರ್ಥಿಗಳ ಪರವಾಗಿ ಬಿರುಸಿನ ಮತ ಪ್ರಚಾರದಲ್ಲಿ ತೊಡಗಿದ್ದಾರೆ. ಇಂದು ಪ್ರಧಾನಿ ನರೇಂದ್ರ ಮೋದಿ ಅವರು, ಉತ್ತರ ಬಿಹಾರ ಜಿಲ್ಲೆಗಳಾದ ಸಹರ್ಸಾ ಮತ್ತು ಕತಿಹಾರ್‌ನಲ್ಲಿ ರ್‍ಯಾಲಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು, ಶಿಯೋಹರ್, ಸೀತಾಮರ್ಹಿ ಮತ್ತು ಮಧುಬನಿಯಲ್ಲಿ ಮೂರು ಚುನಾವಣಾ ಸಭೆಗಳಲ್ಲಿ ಭಾಗವಹಿಸಲಿದ್ದಾರೆ. ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ವಾದ್ರಾ ಅವರು ಸಹರ್ಸಾ ಮತ್ತು ಲಖಿಸರೈನಲ್ಲಿ ಮಹಾಘಟಬಂಧನ್ ಮೈತ್ರಿಕೂಟದ ಅಭ್ಯರ್ಥಿಗಳ ಪರವಾಗಿ ಮತ ಪ್ರಚಾರ ನಡೆಸಲಿದ್ದಾರೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರು ವೈಶಾಲಿ ಜಿಲ್ಲೆಯಲ್ಲಿ ಚುನಾವಣಾ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕೂಡ ದರ್ಭಾಂಗ, ಮುಜಫರ್‌ಪುರ, ಸರನ್ ಮತ್ತು ಪಾಟ್ನಾದಲ್ಲಿ ನಾಲ್ಕು ರ್‍ಯಾಲಿಗಳಲ್ಲಿ ಭಾಗವಹಿಸಲಿದ್ದಾರೆ.

***************

ತಮಿಳುನಾಡಿಗೆ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯ ಅಗತ್ಯವಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್. ಮುರುಗನ್ ಪ್ರತಿಪಾದಿಸಿದ್ದಾರೆ. ಚೆನ್ನೈನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮಿಳುನಾಡಿನಲ್ಲಿ ಇಂದಿನಿಂದ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಆರಂಭವಾಗಿದೆ. ಪರಿಷ್ಕರಣಾ ಪ್ರಕ್ರಿಯೆಯಲ್ಲಿ ಎರಡೂ ಕಡೆ ಹೆಸರು ಉಲ್ಲೇಖವಾಗಿರುವ ಮತದಾರರನ್ನು ಗುರುತಿಸುವುದು, ಮೃತರ ಹೆಸರುಗಳನ್ನು ತೆಗೆದು ಹಾಕುವುದು ಹಾಗೂ ಮತದಾರರ ಇತರೆ ಕೆಲವು ಸಂಬಂಧಿತ ಮಾಹಿತಿಗಳು ಸೇರಿವೆ ಎಂದು ತಿಳಿಸಿದರು. ಬಿಹಾರದ ಮತದಾರರ ಪಟ್ಟಿ ವಿಶೇಷ ತೀವ್ರ

ಪರಿಷ್ಕರಣೆಯಲ್ಲಿ ೬ ಲಕ್ಷಕ್ಕೂ ಹೆಚ್ಚು ಹೆಚ್ಚುವರಿ ಮತ್ತು ನಕಲಿ ಮತದಾರರು ಕಂಡುಬಂದಿದ್ದಾರೆ ಎಂದು ಹೇಳಿರುವ ಅವರು, ನಕಲಿ ಮತದಾರರ ಹೆಸರುಗಳನ್ನು ಕೈಬಿಟ್ಟಿರುವ ಕ್ರಮವನ್ನು ಸ್ವಾಗತಿಸಿದ್ದಾರೆ.

ಇದೇ ವೇಳೆ ಆಡಳಿತಾರೂಢ ಡಿಎಂಕೆ ವಿರುದ್ಧ ಆರೋಪ ಮಾಡಿದ ಸಚಿವ ಡಾ. ಎಲ್. ಮುರುಗನ್, ಉದ್ಯೋಗದ ಹೆಸರಿನಲ್ಲಿ ವಂಚನೆ, ಭತ್ತ ಖರೀದಿಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಗಳನ್ನು ಸಿಬಿಐ ತನಿಖೆಗೆ ವಹಿಸುವಂತೆ ಒತ್ತಾಯಿಸಿದರು.

***************

ರಾಷ್ಟ್ರವ್ಯಾಪಿ ಡಿಜಿಟಲ್ ಲೈಫ್ ಸರ್ಟಿಫಿಕೇಟ್ ಅಭಿಯಾನ ೪.೦ ಅಡಿಯಲ್ಲಿ ನವದೆಹಲಿಯಲ್ಲಿ ನಡೆಯಲಿರುವ ಎಸ್‌ಬಿಐ ಬೃಹತ್ ಶಿಬಿರದಲ್ಲಿ ಇಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್ ಭಾಗವಹಿಸಲಿದ್ದಾರೆ. ಈ ಅಭಿಯಾನ ೨ ಸಾವಿರಕ್ಕೂ ಹೆಚ್ಚು ನಗರಗಳು ಮತ್ತು ಪಟ್ಟಣಗಳಲ್ಲಿ ಎರಡು ಕೋಟಿ ಪಿಂಚಣಿದಾರರನ್ನು ಸ್ಯಾಚುರೇಶನ್ ಆಧಾರಿತ ಸಂಪರ್ಕ ವಿಧಾನದ ಮೂಲಕ ತಲುಪುವ ಗುರಿಯನ್ನು ಹೊಂದಿದೆ ಎಂದು ಸಿಬ್ಬಂದಿ, ಸಾರ್ವಜನಿಕ ಕುಂದು-ಕೊರತೆಗಳು ಮತ್ತು ಪಿಂಚಣಿ ಸಚಿವಾಲಯ ತಿಳಿಸಿದೆ.

***************

ಪಾಕಿಸ್ತಾನ ಸಕ್ರಿಯವಾಗಿ ಪರಮಾಣು ಶಸ್ತ್ರಾಸ್ತ್ರಗಳನ್ನು ಪರಿಶೀಲಿಸುತ್ತಿರುವ ರಾಷ್ಟ್ರಗಳಲ್ಲಿ ಒಂದಾಗಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಖಾಸಗಿ ಸುದ್ದಿ ವಾಹಿನಿಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಅವರು, ರಷ್ಯಾ, ಚೀನಾ, ಉತ್ತರಕೊರಿಯಾ ಮತ್ತು ಪಾಕಿಸ್ತಾನ ಪರಮಾಣು ಪರೀಕ್ಷೆಗಳನ್ನು ನಡೆಸುತ್ತಿವೆ ಎಂದು ತಿಳಿಸಿದ್ದಾರೆ. ಇತರೆ ದೇಶಗಳು ಪರಮಾಣು ಪರೀಕ್ಷೆಗಳನ್ನು ನಡೆಸುತ್ತಿರುವಾಗ ಅಮೆರಿಕ ಮಾತ್ರ ಪರಮಾಣು ಪರೀಕ್ಷೆಯನ್ನು ನಿಲ್ಲಿಸಬಾರದು. ಅದನ್ನು ಮುಂದುವರಿಸಬೇಕು ಎಂದು ಅವರು ಪ್ರತಿಪಾದಿಸಿದ್ದಾರೆ. ರಷ್ಯಾ ಮತ್ತು ಚೀನಾದೊಂದಿಗೆ ಪರಮಾಣು ನಿಶ್ಯಸ್ತ್ರೀಕರಣ ಪ್ರಯತ್ನಗಳ ಕುರಿತು ಅಮೆರಿಕ ಚರ್ಚಿಸಿದೆ ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಮೂವತ್ತು ವರ್ಷಗಳ ನಂತರ ಪರಮಾಣು ಶಸ್ತ್ರಾಸ್ತ್ರಗಳ

ಪರೀಕ್ಷೆಯನ್ನು ಅಮೆರಿಕ ಪುನರಾರಂಭಿಸಲಿದೆ ಎಂದು ಇತ್ತೀಚೆಗೆ ಅಮೆರಿಕ ಅಧ್ಯಕ್ಷರು ಘೋಷಿಸಿದ್ದರು.

***************

ತೆಲಂಗಾಣದ ರಂಗಾರೆಡ್ಡಿ ಜಿಲ್ಲೆಯ ಚೆವೆಲ್ಲಾ ಬಳಿಯ ಮಿರ್ಜಗುಡ-ಖಾನಾಪುರ ರಸ್ತೆಯಲ್ಲಿ ಇಂದು ಬೆಳಗ್ಗೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ಒಟ್ಟು ೧೯ ಜನರು ಸಾವನಪ್ಪಿದ್ದಾರೆ. ವಿಕರಬಾದ್-ಹೈದರಾಬಾದ್ ಮಾರ್ಗದಲ್ಲಿ ಬೆಳಗ್ಗೆ ೮ ಗಂಟೆ ಸುಮಾರಿಗೆ ದ್ವಿಚಕ್ರ ವಾಹನವನ್ನು ಹಿಂದಿಕ್ಕುವ ಪ್ರಯತ್ನದಲ್ಲಿ ಟ್ರಕ್‌ಯೊಂದು ಸರ್ಕಾರಿ ಬಸ್‌ಗೆ ಢಿಕ್ಕಿ ಹೊಡೆದ ಪರಿಣಾಮ ಈ ಘಟನೆ ಸಂಭವಿಸಿದೆ. ಘಟನೆಯಲ್ಲಿ ಗಾಯಗೊಂಡ ೨೦ ಪ್ರಯಾಣಿಕರನ್ನು ವಿವಿಧ ಆಸ್ಪತ್ರೆಗಳಲ್ಲಿ ದಾಖಲಿಸಲಾಗಿದೆ. ಅಪಘಾತದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ಸಂತಾಪ ಸೂಚಿಸಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಗಾಯಾಳುಗಳು ಶೀಘ್ರ ಗುಣಮುಖರಾಗಲೆಂದು ಹಾರೈಸಿದ್ದಾರೆ.

***************

ರಾಜಸ್ಥಾನದ ಫಲೋಡಿ ಜಿಲ್ಲೆಯ ಮಥೋಡಾ ಪೊಲೀಸ್ ಠಾಣೆ ಪ್ರದೇಶದಲ್ಲಿ ಸಂಭವಿಸಿದ ರಸ್ತೆ ಅಪಘಾತದಲ್ಲಿ ೧೫ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ. ಯಾತ್ರಿಕರನ್ನು ಕರೆದೊಯ್ಯುತ್ತಿದ್ದ ಬಸ್, ರಸ್ತೆಯಲ್ಲಿ ನಿಂತಿದ್ದ ಟ್ರೇಲರ್‌ಗೆ ಡಿಕ್ಕಿ ಹೊಡೆದು ಹಲವಾರು ಜನರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

***************